ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ರಾಜ್ಯದಲ್ಲಿನ ರಸಗೊಬ್ಬರ ಕೊರತೆ ನಿವಾರಣೆ ಕುರಿತು

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :-

181 (244) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಈ ಬಾರಿ ಸಾಕಷ್ಟು ಮಳೆಯಾಗಿದ್ದು, ರೈತರು ಬಿತ್ತನೆಗಾಗಿ ತಯಾರಾಗಿದ್ದು, ರಸಗೊಬ್ಬರದ ಕೊರತೆಯಿಂದ ಕಂಗಾಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಉತ್ತರ ಕರ್ನಾಟಕ ಭಾಗದ ಹಲವಾರು ಜಿಲ್ಲೆಗಳಲ್ಲಿ ಯೂರಿಯಾ ಕೊರತೆಯಿಂದಾಗಿ ರೈತರು ಹಗಲಿರುಳು ಸಂಬಂಧಿಸಿದ ಸಂಸ್ಥೆಗಳ ಬಳಿ ಕಾಯುತ್ತಿದ್ದು, ಇದನ್ನು ನಿವಾರಿಸುವ ನಿಟ್ಟಿನಲ್ಲಿ ಸರ್ಕಾರದಿಂದ ಯಾವ ಕ್ರಮ ಕೈಗೊಂಡಿದೆ ;

(ಇ) ರಸಗೊಬ್ಬರ ಕೊರತೆಯನ್ನು ನಿವಾರಿಸಲು ಸರ್ಕಾರವು ಪ್ರತಿವರ್ಷದಂತೆ ಈ ವರ್ಷವೂ ಕೂಡಾ ಗೊಬ್ಬರದ ದಾಸ್ತಾನನ್ನು ಮಾಡಿಕೊಂಡಿದೆಯೇ ;

(ಈ) ಗೊಬ್ಬರದ ದಾಸ್ತಾನು ಸಾಕಷ್ಟಿದ್ದು, ವ್ಯಾಪಾರಿಗಳು ಕೃತಕ ಕೊರತೆಯನ್ನು ನಿರ್ಮಾಣ ಮಾಡಿ ಅದರಿಂದ ಲಾಭವನ್ನು ಪಡೆದುಕೊಳ್ಳುತ್ತಿರುವ ಬಗ್ಗೆ ವರದಿಯಾಗಿದ್ದು, ಇದರ ಬಗ್ಗೆ ಸರ್ಕಾರದ ನಿಲುವೇನು ;

(ಉ) ಮೇಲಿನ ಎಲ್ಲಾ ಸಮಸ್ಯೆಗಳ ಪರಿಹಾರಕ್ಕಾಗಿ ಸರ್ಕಾರ ತೆಗೆದುಕೊಂಡ ಕ್ರಮಗಳಾವುವು ?